ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 80/2023**

ಪ್ರ.ವ.ಬೋ.ತಾಃ 29-10-2025

ಚಾಸಾಃ 6 ಫ್ರಾಸಾಃ 7

| | |
|---|---|
| ಸಾಕ್ಷಿಯ ಹೆಸರು | ಹನುಮಂತೇಗೌಡ |
| ತಂದೆ/ಗಂಡನ ಹೆಸರು | ಹನುಮಂತರಾಯಪ್ಪ |
| ವಯಸ್ಸು | 67 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಗಡ್ಡೇತಿಮ್ಮನಹಳ್ಳಿ, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ಈಗ ತೋರುತ್ತಿರುವ ಸ್ಥಳ ಮತ್ತು ಅಮಾನತ್ತು ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.2 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ದೊಣ್ಣೆ ಮತ್ತು ಸೀರೆಗಳನ್ನು ನಾನು ನೋಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>– ಮಾನ್ಯ ಸ.ಸ.ಅ. ರವರಿಂದಃ–**

ದಿಃ 17.11.2023 ರಂದು ಚಾಸಾ.1 ರವರಿಗೆ ಸೇರಿದ ಸರ್ವೆ ನಂಬರ್ 63 ರ ಜಮೀನಿನಲ್ಲಿ ಆದ ಗಲಾಟೆಗೆ ಸಂಬಂಧಪಟ್ಟಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಚಾಸಾ.1 ರವರ ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ.5 ರವರ ಸಮಕ್ಷಮ ಮಧ್ಯಾಹ್ನ 1.00 ರಿಂದ 2.00 ಗಂಟೆ ಸಮಯದಲ್ಲಿ ನಿಪಿ.2 ರಂತಹ ಸ್ಥಳ ಪಂಚನಾಮೆ ಮಾಡಿ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೊಲೀಸರು ಮು.ಮಾ.01 ರಿಂದ 03 ರಂತಹ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>– ಆರೋಪಿತರ ಪರವಾಗಿ ಶ್ರೀ. ವಕೀಲರಿಂದಃ**– <u>ಏನೂ ಇಲ್ಲ</u>.

<u>ಮರು ವಿಚಾರಣೆಃ</u>– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ